# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 22-03-2021 ಪ್ರಶ್ನೆ ಸಂಖ್ಯೆ : 1603 (1861)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾದ ದಿನಾಂಕ : 22-03-2021

ಉತ್ತರಿಸುವ ಸಚಿವರು : ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

ವಿಷಯ : "ರಾಷ್ಟ್ರೀಯ ಸರಿದೂಗಿಸುವ ಅರಣ್ಯೀಕರಣ ನಿಧಿ ನಿರ್ವಹಣೆ" ಯೋಜನೆ

(ಅ) ಕಳೆದ ಮೂರು ವರ್ಷಗಳಲ್ಲಿ ಕೇಂದ್ರ ಸರ್ಕಾರದ ರಾಷ್ಟ್ರೀಯ ಸರಿದೂಗಿಸುವ ಅರಣ್ಯೀಕರಣ ನಿಧಿ ನಿರ್ವಹಣೆ (Compensatory Afforestation Fund ManagmentNational Fund) ಯೋಜನೆ ಅಡಿಯಲ್ಲಿ ರಾಜ್ಯ ಸರ್ಕಾರಕ್ಕೆ ಹಂಚಿಕೆ ಮಾಡಿರುವ ಅನುದಾನವೆಷ್ಟು; ಈ ಅನುದಾನವನ್ನು ಕೇಂದ್ರ ಮತ್ತು ರಾಜ್ಯಗಳ ನಡುವೆ ಯಾವ ಅನುಪಾತದಲ್ಲಿ ಬಿಡುಗಡೆ ಮಾಡಲಾಗಿದೆ;

(ಆ) ಈ ಅನುದಾನವನ್ನು ಸರಿದೂಗಿಸುವ ಅರಣ್ಯೀಕರಣ ನಿಧಿ (Compensatory Afforestation Fund-CAF-Act 2016) ಕಾಯಿದೆ-2016 ಮತ್ತು ಈ ಬಗ್ಗೆ ರೂಪಿಸಿರುವ ನಿಯಮಗಳ ಅಡಿಯಲ್ಲಿ ಯಾವ ಯಾವ ಬಾಬಸ್ತುಗಳಿಗೆ ಯಾವ ಲೆಕ್ಕ ಶೀರ್ಷಿಕೆ ಅಡಿಯಲ್ಲಿ ಹಂಚಿಕೆ ಮಾಡಲಾಗಿದೆ;

(ಇ) ಕಳೆದ ಮೂರು ವರ್ಷಗಳಲ್ಲಿ ಹಂಚಿಕೆಯಾದ ಅನುದಾನವನ್ನು ಪಡೆಯಲು ರಾಜ್ಯ ಸರ್ಕಾರ ಅಗತ್ಯವಿರುವ ವಾರ್ಷಿಕ ಕಾರ್ಯಾಚರಣೆ ಯೋಜನೆಗಳನ್ನು ಸಿದ್ಧಪಡಿಸಿ, ಕೇಂದ್ರ ಸರ್ಕಾರಕ್ಕೆ ಸಲ್ಲಿಸಿ ಮಂಜೂರಾತಿ ಪಡೆಯಲಾಗಿದೆಯೇ; (ಸಂಪೂರ್ಣ ವಿವರ ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಈ ಯೋಜನೆಯಡಿ ನಿಗಧಿಪಡಿಸಿದ ಭೌತಿಕ ಮತ್ತು ಆರ್ಥಿಕ ಗುರಿ ಹಾಗೂ ಸಾಧನೆಗಳೇನು? (ವಿವರ ನೀಡುವುದು)